ಶ್ರೀ ಧರ್ಮಸಿಂಗ್ (ಮಾನ್ಯ ಮುಖ್ಯಮಂತ್ರಿಗಳು)

ಅ) ಇಲ್ಲ.

ಆ) ಬಿಡುಗಡೆ ಮಾಡಲಾಗಿದೆ.

ಬೆಳಗಾಂ ಜಿಲ್ಲೆಯ ಪ್ರಾಥಮಿಕ ಶಾಲೆಗೆ ರೂ. 25.40 ಲಕ್ಷಗಳು.

R.I.D.F. ಯೋಜನೆಯಡಿ 73 ಪ್ರೌಢಶಾಲೆಗಳಲ್ಲಿ 172 ಕೊಠಡಿಗಳನ್ನು ನಿರ್ಮಿಸಲು ರೂ. 407.96 ಲಕ್ಷಗಳನ್ನು ಒದಗಿಸಿಕೊಳ್ಳಲಾಗಿದೆ.

ಇ) ಅ) ಅಥಣಿ ತಾಲ್ಲೂಕಿಗೆ 71 ಪ್ರಾಥಮಿಕ ಶಾಲಾ ಕೊಠಡಿ ನಿರ್ಮಾಣಕ್ಕಾಗಿ ರೂ. 129.90 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಆ) ಅಥಣಿ ತಾಲ್ಲೂಕಿಗೆ 22 ಪ್ರೌಢ ಶಾಲಾ ಕೊಠಡಿ ನಿರ್ಮಿಸಲು ರೂ. 52.06 ಲಕ್ಷಗಳನ್ನು R.I.D.F. ಯೋಜನೆಯಡಿ ಒದಗಿಸಿಕೊಳ್ಳಲಾಗಿದೆ.

...

350 (528) : ಶ್ರೀ ಮಾಧುಸ್ವಾಮಿ ಜೆ.ಸಿ. (ಚಿಕ್ಕನಾಯಕನಹಳ್ಳಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಹಳ್ಳಿಗಳ ಸಂಪರ್ಕ ರಸ್ತೆಗಳು ಸಂಚರಿಸಲಾರದಂತಹ ದುಸ್ಥಿತಿಗೆ ಬಂದಿರುವುದು ಸರ್ಕಾರದ ಗಮನದಲ್ಲಿದೆಯೇ;

ಆ) ಈ ರಸ್ತೆಗಳನ್ನು ದುರಸ್ತಿಗೊಳಿಸಲು ಹಣದ ಕೊರತೆ ಇರುವುದು ನಿಜವೇ;

ಇ) ಇದನ್ನು ಸರಿಪಡಿಸಲು ಸರ್ಕಾರ ಯಾವಾಗ ಕ್ರಮ ಜರುಗಿಸಲಾಗುವುದು (ವಿವರ ಒದಗಿಸುವುದು)?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು)

ಅ) ಗಮನದಲ್ಲಿದೆ.

ಆ) ಜಿಲ್ಲಾ ಪಂಚಾಯಿತಿಗಳಿಗೆ ನಿಗದಿಪಡಿಸಿರುವ ವಿವಿಧ ಲೆಕ್ಕಶೀರ್ಷಿಕೆಯಡಿಯಲ್ಲಿ ಲಭ್ಯವಿರುವ ಅನುದಾನಕ್ಕೆ ಅನುಗುಣವಾಗಿ ರಸ್ತೆಗಳನ್ನು ಆಗಿಂದ್ದಾಗೆ ದುರಸ್ತಿ ಪಡಿಸಲಾಗುತ್ತಿದೆ.

ಇ) ಈ ರಸ್ತೆ ನಿರ್ವಹಣೆ ಮತ್ತು ದುರಸ್ತಿಗಾಗಿ ಮುಖ್ಯಮಂತ್ರಿಗಳ ಗ್ರಾಮೀಣ ರಸ್ತೆ ಅಭಿವೃದ್ಧಿ ನಿಧಿ ಯೋಜನೆಯಡಿ ಜಿಲ್ಲಾ ಪಂಚಾಯಿತಿಗಳು ಕ್ರಮ ಕೈಗೊಳ್ಳಬೇಕಾಗಿರುತ್ತದೆ.

...

351 (531) : ಶ್ರೀ ಮಾಧುಸ್ವಾಮಿ ಜೆ.ಸಿ. (ಚಿಕ್ಕನಾಯಕನಹಳ್ಳಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತಿಪಟೂರು ತಾ: ಕಿಬ್ಬನಹಳ್ಳಿ ಕ್ರಾಸ್‌ನಲ್ಲಿ ಹಾಗೂ ಅದರ ಅಕ್ಕ-ಪಕ್ಕ ನಡೆಯುತ್ತಿರುವ ದರೋಡೆ ಮತ್ತು ಕೊಲೆಗಳು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಈ ಹಿಂದೆ ಪೊಲೀಸ್ ಠಾಣೆ ಮಂಜೂರು ಮಾಡಿ ಮತ್ತೆ ಸ್ಥಗಿತಗೊಳಿಸಲು ಕಾರಣವೇನು;

ಇ) ಕೆ.ಬಿ. ಕ್ರಾಸ್‌ನ ಸಂಚಾರ ಮತ್ತು ಗಲಭೆಗಳನ್ನು ಗಮನದಲ್ಲಿಟ್ಟುಕೊಂಡು ಆದ್ಯತೆಯ ಮೇಲೆ ಪೊಲೀಸ್ ಠಾಣೆ ಪ್ರಾರಂಭಿಸುವುದು ಅವಶ್ಯಕವಲ್ಲವೆ;

ಈ) ಹಾಗಿದ್ದಲ್ಲಿ, ಅಲ್ಲಿ ಠಾಣೆಯನ್ನು ಯಾವಾಗ ಪ್ರಾರಂಭ ಮಾಡಲಾಗುವುದು?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು)

ಅ) ಹೌದು.

ಆ) ಸರ್ಕಾರಿ ಆದೇಶ ಸಂಖ್ಯೆ: ಹೆಚ್‌ಡಿ 123 ಪಿಒಪಿ 1998 ದಿನಾಂಕ : 11–05–99ರಲ್ಲಿ ತಿಪಟೂರು (ಗ್ರಾ) ಠಾಣೆಯನ್ನು ಕಿಬ್ಬನಹಳ್ಳಿ ಕ್ರಾಸಿಗೆ ವರ್ಗಾಯಿಸಲಾಗಿತ್ತು. ಸ್ಥಳೀಯ ಜನರ ಪ್ರತಿಭಟನೆಯಿಂದ ಸ್ಥಗಿತಗೊಳಿಸಲಾಗಿದೆ. ಮತ್ತೆ ಈ ವಿಷಯ ಇಲಾಖಾ ಪರಿಶೀಲನೆಯಲ್ಲಿದ್ದು, ಕಿಬ್ಬನಹಳ್ಳಿ ಪೊಲೀಸ್ ಠಾಣೆಯನ್ನು ಬಲವೃದ್ಧಿಗೊಳಿಸಲಾಗಿದೆ.

ಇ) ಕಿಬ್ಬನಹಳ್ಳಿ ಪೊಲೀಸ್ ಠಾಣೆಯ ಸಿಬ್ಬಂದಿಯನ್ನು ಹೆಚ್ಚಿಸಿ, ಬಲವೃದ್ಧಿಗೊಳಿಸಿರುವ ಹಿನ್ನೆಲೆಯಲ್ಲಿ ಪೊಲೀಸ್ ಠಾಣೆ ತೆರೆಯುವ ಅವಶ್ಯಕತೆ ಕಂಡುಬರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

...

352 (533) : ಶ್ರೀ ಮಾಧುಸ್ವಾಮಿ ಜೆ.ಸಿ. (ಚಿಕ್ಕನಾಯಕನಹಳ್ಳಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಮಂಜೂರಾಗಿರುವ ವೈದ್ಯರುಗಳ ಸಂಖ್ಯೆ ಎಷ್ಟು ಹಾಗೂ ಹಾಲಿ ಖಾಲಿ ಇರುವ ಹುದ್ದೆಗಳು ಯಾವುವು;

ಆ) ಈ ಹುದ್ದೆಗಳನ್ನು ತುಂಬದಿರಲು ಕಾರಣವೇನು;

ಇ) ವೈದ್ಯರ ಕೊರತೆಯಿಂದಾಗಿ ಸಾರ್ವಜನಿಕರಿಗೆ ಉಂಟಾಗಿರುವ ತೊಂದರೆ ಸರ್ಕಾರದ ಗಮನದಲ್ಲಿದೆಯೇ;

ಈ) ಹಾಗಿದ್ದಲ್ಲಿ, ಸದರಿ ಹುದ್ದೆಗಳನ್ನು ತುಂಬಲು ಯಾವಾಗ ಕ್ರಮ ಜರುಗಿಸಲಾಗುವುದು?

ಶ್ರೀ ಧರ್ಮಸಿಂಗ್ (ಮಾನ್ಯ ಮುಖ್ಯಮಂತ್ರಿಗಳು)

ಅ) ಚಿಕ್ಕನಾಯಕನಹಳ್ಳಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಮಂಜೂರಾಗಿರುವ
ವೈದ್ಯರ ಹುದ್ದೆಗಳ ಸಂಖ್ಯೆ – 6
ಖಾಲಿ ಇರುವ ಹುದ್ದೆಗಳ ಸಂಖ್ಯೆ – 3

ಆ) ತಜ್ಞರ ಕೊರತೆ.

ಇ) ಹೌದು

ಈ) ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ. ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳಿಗೆ ನಿವೃತ್ತ ತಜ್ಞರುಗಳನ್ನು ಮತ್ತು ಖಾಸಗಿ ತಜ್ಞ ವೈದ್ಯರುಗಳನ್ನು ಸಂದರ್ಶಕ ತಜ್ಞರುಗಳನ್ನಾಗಿ ಗುತ್ತಿಗೆ ಆಧಾರದ ಮೇಲೆ ನೇಮಿಸಲು ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ.